ಸ್ವಾತಂತ್ರ್ಯದ ಅಮೃತಮಹೋತ್ಸವ

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ಅಂತರ್ಜಾಲ : https://kptcl.karnataka.gov.in

ದೂರವಾಣಿ ಸಂಖ್ಯೆ : 080-22212343 ಇ-ಮೇಲ್ ವಿಳಾಸ : director.ahr.kptcl@gmail.com

ಸಂಖ್ಯೆ: ಕವಿಪ್ರನಿನಿ/ಬಿ16/820/2019-20 ದಿನಾಂಕ: 14 MAR 2023

## ಸುತ್ತೋಲೆ

**ವಿಷಯ:** ಪರೀಕ್ಷಾರ್ಥ/ವಿಸ್ತರಿಸಿದ ಪರೀಕ್ಷಾರ್ಥ ಅವಧಿಯಲ್ಲಿ ನಿಗಧಿಪಡಿಸಿರುವ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾಗದೇ ಇರುವಂತಹ ನೌಕರರನ್ನು ಸೇವೆಯಿಂದ ವಜಾಗೊಳಿಸುವ ಬಗ್ಗೆ.

**ಉಲ್ಲೇಖ:**
1. ಮಂಡಳಿ ಪತ್ರ ಸಂಖ್ಯೆ: ಕವಿಮಂ /ಬಿ16/ಬಿ15/7982/83-84 ದಿನಾಂಕ: 26.02.1994
2. ನಿಗಮ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5816/82-83 ದಿನಾಂಕ: 07.03.2003.
3. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/820/2019-20 ದಿನಾಂಕ: 03.06.2021.
4. ದಿನಾಂಕ: 02.02.2023 ರಂದು ನಡೆದ ಇಲಾಖಾ ಪರೀಕ್ಷಾ ಮಂಡಳಿಯ 35ನೇ ಸಭೆಯ ನಡವಳಿ ಸಂಖ್ಯೆ: ಕವಿಪ್ರನಿನಿ/ಬಿ66/41637/2013-14 ದಿನಾಂಕ: 02.02.2023.

***

ಪರೀಕ್ಷಾರ್ಥ/ವಿಸ್ತರಿಸಿದ ಪರೀಕ್ಷಾರ್ಥ ಅವಧಿಯಲ್ಲಿ ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳನ್ವಯ, ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು, ನಿಗದಿತ ಪರೀಕ್ಷೆ/ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದಿದ್ದಲ್ಲಿ ನಿಯಮಾನುಸಾರ ಸೇವೆಯಿಂದ ವಜಾಗೊಳಿಸಲು ಅಗತ್ಯ ಕ್ರಮ ಜರುಗಿಸುವಂತೆ ಈಗಾಗಲೇ ಸುತ್ತೋಲೆ/ಆದೇಶ/ಪತ್ರಗಳ ಮೂಲಕ ಹಲವಾರು ಬಾರಿ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಆದಾಗ್ಯೂ, ನೇಮಕಾತಿ ಪ್ರಾಧಿಕಾರಿಗಳು ಈ ಸಂಬಂಧ ಯಾವುದೇ ಕ್ರಮ ಜರುಗಿಸದೇ ನೌಕರರು ವಯೋನಿವೃತ್ತಿ ಹೊಂದಲು ಅವಕಾಶ ಮಾಡಿಕೊಡುತ್ತಿರುತ್ತಾರೆ ಹಾಗೂ ನಿವೃತ್ತಿ ನಂತರ ವಿಶೇಷ ಪ್ರಕರಣವೆಂದು ಪರಿಗಣಿಸಿ ಪಿಂಚಣಿ ಸವಲತ್ತುಗಳನ್ನು ಮಂಜೂರು ಮಾಡಲು ಪ್ರಸ್ತಾವನೆಗಳನ್ನು ಅನುಮೋದನೆಗಾಗಿ ನಿಗಮ ಕಾರ್ಯಾಲಯಕ್ಕೆ ಸಲ್ಲಿಸುತ್ತಿರುತ್ತಾರೆ. ಇಂತಹ ಕ್ರಮವು ನೇಮಕಾತಿ ಪ್ರಾಧಿಕಾರಿಗಳ ಕರ್ತವ್ಯ ಲೋಪವೆಂದು ಪರಿಗಣಿಸಲಾಗುತ್ತದೆ.

ಈ ಸಂಬಂಧ, ಪರೀಕ್ಷಾರ್ಥ ಅವಧಿಯನ್ನು ಪೂರ್ಣಗೊಳಿಸಲು ನಿಗದಿಪಡಿಸಿರುವ ವೃತ್ತಿ ಪೂರ್ವ ತರಬೇತಿ ಪರೀಕ್ಷೆ, ಕಡ್ಡಾಯ ಇಲಾಖಾ ಪರೀಕ್ಷೆ ಮತ್ತು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗದ ನೌಕರರ ವಿರುದ್ಧ ನಿಗಮದ ನೌಕರರ (ವರ್ಗೀಕರಣ, ಶಿಸ್ತು ನಿಯಂತ್ರಣ ಮತ್ತು ಮೇಲ್ಮನವಿ) ನಿಬಂಧನೆಗಳ ಅನ್ವಯ ಕೂಡಲೇ ಶಿಸ್ತು ಕ್ರಮ ಜರುಗಿಸಿ ನಿಯಮಾನುಸಾರ ಸೇವೆಯಿಂದ ವಜಾಗೊಳಿಸಲು ಎಲ್ಲಾ ಸಕ್ಷಮ / ನೇಮಕಾತಿ ಪ್ರಾಧಿಕಾರಿಗಳಿಗೆ ಅಂತಿಮವಾಗಿ ಕಟ್ಟುನಿಟ್ಟಾಗಿ ನಿರ್ದೇಶನ ನೀಡಲಾಗಿದೆ.

AGM-2

ನಿಗಮದ ಈ ನಿರ್ದೇಶನದ ನಂತರವೂ ಸಹಾ ಅಗತ್ಯ ಕ್ರಮ ಜರುಗಿಸದಿದ್ದಲ್ಲಿ, ಸಂಬಂಧಪಟ್ಟ ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳನ್ನು ಪ್ರಕರಣಗಳಲ್ಲಿ ವೈಯಕ್ತಿಕವಾಗಿ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತುಕ್ರಮ ಕೈಗೊಳ್ಳಲಾಗುವುದು.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಮೆಮೋ**

**ಕ್ರಮಾಂಕ:ಚಾವಿಸನಿನಿ/ಆ ಮತ್ತು ಮಾಸಂ/05/04/2022-23**/cys-1859 **ದಿನಾಂಕ:** 23 MAR 2023

ನಿರ್ದೇಶಕರು(ಆ ಮತ್ತು ಮಾ.ಸಂ.), ಕವಿಪ್ರನಿನಿ., ಬೆಂಗಳೂರುರವರ ಸುತ್ತೋಲೆ ಪತ್ರ ಸಂಖ್ಯೆ:ಕವಿಪ್ರನಿನಿ/ಬಿ16/820/2019-20 ದಿನಾಂಕ:14.03.2023ರ ಸುತ್ತೋಲೆಯನ್ವಯ ಚಾವಿಸನಿನಿಯ ಅಧಿಕಾರಿ/ನೌಕರರಿಗೆ ಪರೀಕ್ಷಾರ್ಥ ಅವಧಿಯನ್ನು ಪೂರ್ಣಗೊಳಿಸಲು ನಿಗದಿಪಡಿಸಿರುವ ವೃತ್ತಿ ಪೂರ್ವ ತರಬೇತಿ ಪರೀಕ್ಷೆ, ಕಡ್ಡಾಯ ಇಲಾಖಾ ಪರೀಕ್ಷೆ ಮತ್ತು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗದ ಅಧಿಕಾರಿ/ನೌಕರರ ವಿರುದ್ಧ ಕೂಡಲೇ ಶಿಸ್ತು ಕ್ರಮ ಜರುಗಿಸುವಂತೆ ಎಲ್ಲಾ ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳಿಗೆ ಅಂತಿಮವಾಗಿ ಕಟ್ಟುನಿಟ್ಟಾಗಿ ನಿಯಮವನ್ನು ಪಾಲಿಸುವಂತೆ ನಿರ್ದೇಶನ ನೀಡಲಾಗಿದೆ.

ಸದರಿ ವಿಷಯವನ್ನು ಅತೀ ಸೂಕ್ಷ್ಮವೆಂದು ಪರಿಗಣಿಸಿ, ಪದವೃಂದ "ಎ", "ಬಿ" ಮತ್ತು "ಸಿ" ಮತ್ತು "ಡಿ" ಗುಂಪಿನ ಎಲ್ಲಾ ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕಡ್ಡಾಯವಾಗಿ ಸೂಕ್ತ ಕ್ರಮವಹಿಸಿ ವರದಿಯನ್ನು ದಿನಾಂಕ:31.03.2023ರೊಳಗೆ ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ.)
ಚಾವಿಸನಿನಿ., ನಿಗಮ ಕಛೇರಿ, ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ನಿಗಮ ಕಛೇರಿ, ಮೈಸೂರು.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ಚಾವಿಸನಿನಿ., ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಹಾಸನ/ಮೈಸೂರು.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿರವರ ಮಾಹಿತಿಗಾಗಿ ಹಾಗೂ ತಮ್ಮ ವ್ಯಾಪ್ತಿಯ ಕಛೇರಿಗಳಲ್ಲಿರುವ ಮಾಹಿತಿಯನ್ನು ಕ್ರೂಢೀಕರಿಸಿ ಈ ಕಛೇರಿಗೆ ಸಲ್ಲಿಸುವುದು.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿರವರ ಮಾಹಿತಿಗಾಗಿ ಹಾಗೂ ವಿಷಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ಜರೂರಾಗಿ ಸಂಬಂಧಿಸಿದ ವೃತ್ತ ಕಛೇರಿಗಳಿಗೆ ಸಲ್ಲಿಸಲು ಕ್ರಮ ಕೈಗೊಳ್ಳುವುದು.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಸಹಾಯಕ ಪ್ರಧಾನ ವ್ಯವಸ್ಥಾಪಕರು(ಆಂ.ನಿ), ಚಾವಿಸನಿನಿ., ನಿಗಮ ಕಛೇರಿ, ಮೈಸೂರುರವರ ಮಾಹಿತಿಗಾಗಿ ಹಾಗೂ ವಿಷಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ಜರೂರಾಗಿ ಸಂಬಂಧಿಸಿದ ವೃತ್ತ ಕಛೇರಿಗಳಿಗೆ ಸಲ್ಲಿಸಲು ಕ್ರಮ ಕೈಗೊಳ್ಳುವುದು.

**ಪು.ತಿ.ನೋ.**

- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ಮುಖ್ಯ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಪ್ರತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ ಮುಖ್ಯ ಆರ್ಥಿಕ ಸಲಹೆಗಾರರುರವರ ಗಮನಕ್ಕೆ ತರುವಂತೆ ಕೋರಿದೆ.
- ಸ-2(ಆ ಮತ್ತು ಮಾ.ಸಂ)/ಪ್ರ.ಕ.